31
15 ಫೆಬ್ರವರಿ'26

# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಎಸ್. ರವಿ ಹಾಗೂ ಶ್ರೀ ಎಂ.ಎಲ್. ಅನಿಲ್ ಕುಮಾರ್ ರವರು ನಿಯಮ-72ರಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಉತ್ತರ.**

***

**ವಿಷಯ:** ಈ ಹಿಂದೆ 2020-25ನೇ ಸಾಲಿಗೆ ರಚಿವಾಗಿದ್ದ ರಾಜ್ಯದ ಗ್ರಾಮ ಪಂಚಾಯತಿಗಳ ಅವಧಿಯು 2026 ನೇ ಜನವರಿಯಿಂದ ಮಾರ್ಚ್ ತಿಂಗಳುಗಳ ವಿವಿಧ ದಿನಾಂಕಗಳಂದು ಮುಕ್ತಾಯಗೊಳ್ಳುತ್ತಿದ್ದು, ಅಂತಹ ಗ್ರಾಮ ಪಂಚಾಯತಿಗಳಿಗೆ ನಿಯಮಾನುಸಾರ ನಿಗಧಿತ ಅವಧಿಯೊಳಗೆ ಚುನಾವಣೆಗಳನ್ನು ನಡೆಸದೆ ಸರ್ಕಾರದಿಂದ ಆಡಳಿತಾಧಿಕಾರಿಗಳನ್ನು ನೇಮಿಸುತ್ತಿರುವ ಬದಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 8 ಬಿ(i) ರನ್ವಯ ಹಾಲಿ ಇರುವ ಆಡಳಿತ ಸಮಿತಿಯನ್ನೇ, ನೂತನ ಆಡಳಿತ ಸಮಿತಿಯಾಗಿ 6 ತಿಂಗಳುಗಳಿಗೆ ವಿಸ್ತರಿಸುವ ಮೂಲಕ ಪ್ರಜಾಪ್ರಭುತ್ವದ ಅಡಿಪಾಯವನ್ನು ಗಟ್ಟಿಗೊಳಿಸುವ ಕುರಿತು.

******

**ಉತ್ತರ:** ಭಾರತ ಸಂವಿಧಾನದ ಅನುಚ್ಛೇದ 243ಇ ರಲ್ಲಿ ಪಂಚಾಯಿತಿಗಳ ಅವಧಿ ಬಗ್ಗೆ ತಿಳಿಸಲಾಗಿದ್ದು, ಉಪಬಂಧ ಈ ಕೆಳಕಂಡಂತಿದೆ.

> "**243ಇ. ಪಂಚಾಯಿತಿಗಳ ಅವಧಿ, ಇತ್ಯಾದಿ.**-(1) ಪ್ರತಿಯೊಂದು ಪಂಚಾಯಿತಿಯನ್ನು ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಮೇರೆಗೆ ಐದು ವರ್ಷಗಳಿಗಿಂತ ಮುಂಚಿತವಾಗಿ ವಿಸರ್ಜಿಸಿದ್ದ ಹೊರತು, **ಅದರ ಮೊದಲ ಸಭೆಗಾಗಿ ಗೊತ್ತುಪಡಿಸಿದ ದಿನಾಂಕದಿಂದ ಅದು ಐದು ವರ್ಷಗಳ ಅವಧಿಯವರೆಗೆ ಮುಂದುವರಿಯತಕ್ಕದ್ದು, ಆದರೆ ಅದಕ್ಕಿಂತ ಹೆಚ್ಚು ಅವಧಿಯವರೆಗೆ ಅಲ್ಲ**".

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 41ರಲ್ಲಿ ಗ್ರಾಮ ಪಂಚಾಯಿತಿ ಸದಸ್ಯರ ಹುದ್ದೆಯ ಬಗ್ಗೆ ತಿಳಿಸಲಾಗಿದ್ದು, ಉಪಬಂಧ ಈ ಕೆಳಕಂಡಂತಿದೆ.

> "**41. ಹುದ್ದೆಯ ಅವಧಿ.**- ಗ್ರಾಮ ಪಂಚಾಯಿತಿ ಸದಸ್ಯರು ಈ ಅಧಿನಿಯಮದಲ್ಲಿ ಅನ್ಯಥಾ ಉಪಬಂಧಿಸಿರುವುದನ್ನುಳಿದು, **ಐದು ವರ್ಷಗಳವರೆಗೆ ಹುದ್ದೆಯನ್ನು ಧಾರಣ ಮಾಡತಕ್ಕದ್ದು**".

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 8ರಡಿ ಗ್ರಾಮ ಪಂಚಾಯಿತಿಗಳ ಸದಸ್ಯರನ್ನು ಚುನಾಯಿಸಲು ತಪ್ಪಿದ್ದಲ್ಲಿ ಆಡಳಿತ ಸಮಿತಿಯ ಅಥವಾ ಆಡಳಿತಾಧಿಕಾರಿಯ ನೇಮಕದ ಬಗ್ಗೆ ತಿಳಿಸಲಾಗಿದೆ.

ಪ್ರಸ್ತುತ ಇರುವ 5947 ಗ್ರಾಮ ಪಂಚಾಯತಿಗಳ ಪೈಕಿ 2026ರ ಜನವರಿ ತಿಂಗಳಿನಲ್ಲಿ 1116, ಫೆಬ್ರುವರಿ ತಿಂಗಳಿನಲ್ಲಿ 4557, ಮಾರ್ಚ್ ತಿಂಗಳಿನಲ್ಲಿ 12, ಏಪ್ರಿಲ್ ತಿಂಗಳಿನಲ್ಲಿ 27, ಮೇ ತಿಂಗಳಿನಲ್ಲಿ 7, ಜೂನ್ ತಿಂಗಳಿನಲ್ಲಿ 2, ಮತ್ತು ಜುಲೈ ತಿಂಗಳಿನಲ್ಲಿ 7 ಗ್ರಾಮ ಪಂಚಾಯಿತಿಗಳು ಸೇರಿದಂತೆ ಒಟ್ಟು 5728 ಗ್ರಾಮ ಪಂಚಾಯಿತಿಗಳ ಅವಧಿಯು ಮುಕ್ತಾಯವಾಗಲು ಪ್ರಾರಂಭವಾಗಿರುವುದರಿಂದ, ಗ್ರಾಮ ಪಂಚಾಯಿತಿಗಳಲ್ಲಿ ಪರಿಪೂರ್ಣವಾದ ಆಡಳಿತಾತ್ಮಕ ವ್ಯವಸ್ಥೆಯ ಕೊರತೆ ಉಂಟಾಗಿ (Administrative Vacum), ದೈನಂದಿನ ಕಾರ್ಯನಿರ್ವಹಣೆಗೆ ಬಾಧಕ ಉಂಟಾಗುವುದರಿಂದ ಅಧಿನಿಯಮದ ಪ್ರಕರಣ 8 ರಡಿಯ ಉಪಬಂಧಗಳನುಸಾರ ಗ್ರಾಮ ಪಂಚಾಯಿತಿಗಳ ಅವಧಿ ಮುಕ್ತಾಯಗೊಂಡ ನಂತರ ಆಡಳಿತಾಧಿಕಾರಿಗಳನ್ನು ನೇಮಿಸಿ ಅಧಿಸೂಚಿಸುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪಂ 1003 ಗ್ರಾಪಂಅ 2025, ದಿನಾಂಕ:16.01.2026ರಂದು ನಿರ್ದೇಶನ ನೀಡಲಾಗಿದೆ.

ಭಾರತ ಸಂವಿಧಾನದ ಅನುಚ್ಛೇದ 243ಇ ಮತ್ತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 41ರ ಉಪಬಂಧಗಳನ್ವಯ, 2021-26ನೇ ಸಾಲಿಗೆ ರಚಿತವಾಗಿದ್ದ ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಚುನಾಯಿತರಾಗಿರುವ ಗ್ರಾಮ ಪಂಚಾಯಿತಿ ಸದಸ್ಯರ 05 ವರ್ಷಗಳ ಅವಧಿಯು ಮುಕ್ತಾಯಗೊಂಡ ನಂತರ, ಅವರುಗಳನ್ನೇ ಅಧಿನಿಯಮದ ಪ್ರಕರಣ 8(ಬಿ) (i) ರನ್ವಯ ನೂತನ ಆಡಳಿತ ಸಮಿತಿಯಾಗಿ ಮುಂದುವರೆಸಲು ಅವಕಾಶವಿರುವುದಿಲ್ಲ.

ಅಧಿನಿಯಮದಲ್ಲಿರುವ ಉಪಬಂಧದಂತೆ ಗ್ರಾಮ ಪಂಚಾಯತಿಗಳಿಗೆ ಆಡಳಿತ ಅಧಿಕಾರಿಯನ್ನು ನೇಮಿಸಲಾಗಿದೆ. ಗ್ರಾಮ ಪಂಚಾಯತಿಗಳಿಗೆ ಆಡಳಿತ ಅಧಿಕಾರಿಯನ್ನು ನೇಮಿಸಿರುವುದು ರಾಜ್ಯದ ಇತಿಹಾಸದಲ್ಲಿ ಇದೇ ಮೊದಲಲ್ಲ. ಈ ಹಿಂದೆಯೂ ಅನಿವಾರ್ಯ ಕಾರಣಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಸಂದರ್ಭದಲ್ಲಿ ಆಡಳಿತಾಧಿಕಾರಿಗಳನ್ನು ನೇಮಿಸಿರುವ ನಿದರ್ಶನಗಳಿವೆ.

ಸರ್ಕಾರದ ಸುತ್ತೋಲೆ ಸಂಖ್ಯೆ: RDPR 486 GPA 2025, ದಿನಾಂಕ:01-06-2026 ರಲ್ಲಿ ಗ್ರಾಮ ಪಂಚಾಯತಿಗಳ ಸಾರ್ವತ್ರಿಕ ಚುನಾವಣೆ- 2026 ಕ್ಕೆ ಸಂಬಂಧಿಸಿದಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 5 ರಂತೆ ಗ್ರಾಮ ಪಂಚಾಯತಿಗೆ ವರ್ಗವಾರು ಸದಸ್ಯರ ಸ್ಥಾನಗಳನ್ನು ಮತ್ತು ಮೀಸಲಾತಿ ನಿಗಧಿಪಡಿಸಿ, ಅಧಿಸೂಚನೆ ಹೊರಡಿಸಿ, ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಪ್ರತಿಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ.

**ಸಂಖ್ಯೆ:**RDPR 59 GPA 2026

**(ಈಶ್ವರ ಬಿ. ಖಂಡ್ರೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.